ಕೋರಲಾಗಿದ್ದು, ಅಭಿಪ್ರಾಯ ಬಂದ ನಂತರ ಹೊಸ ನೀತಿಯನ್ನು ಪ್ರಕಟಿಸಲಾಗುವುದು.

ಆ) ನೂತನ ಪ್ರವಾಸೋದ್ಯಮ ನೀತಿಯನ್ನು ಜಾರಿಗೊಳಿಸುವ ಸಂದರ್ಭದಲ್ಲಿ ಕ್ರಿಯಾ ಯೋಜನೆಯನ್ನು ರೂಪಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಇ) ರಾಜ್ಯದ ಮೂರು ಕರಾವಳಿ ಜಿಲ್ಲೆಗಳಲ್ಲಿ ಲಭ್ಯವಿರುವ ಪ್ರವಾಸಿ ತಾಣಗಳನ್ನು ಇಲಾಖೆಗೆ ಒದಗಿಸಲಾಗಿರುವ ಅನುದಾನಕ್ಕೆ ಅನುಗುಣವಾಗಿ ಅಭಿವೃದ್ಧಿ ಪಡಿಸಲಾಗಿದೆ.

ಈ) ಕರಾವಳಿ ರಾಜ್ಯಗಳಾದ ಗೋವಾ, ಕರ್ನಾಟಕ ಹಾಗೂ ಕೇರಳಗಳಲ್ಲಿ ಪ್ರವಾಸೋದ್ಯಮ ಬೆಳವಣಿಗೆಗೆ ಇರುವ ನಿಯಮಗಳು ವಿಭಿನ್ನವಾಗಿದೆ. ಅಲ್ಲದೆ ಗೋವಾ ರಾಜ್ಯಕ್ಕೆ ಈ ಕಡಲು ತೀರ ನಿಯಮಗಳು ಸಡಲಿಕೆ / ವಿನಾಯಿತಿ ನೀಡಿರುಂತೆ ನಮ್ಮ ಕಡಲು ತೀರಗಳಿಗೆ ವಿನಾಯ್ತಿ ನೀಡಿರುವುದಿಲ್ಲ. ನಿಯಮದ ಚೌಕಟ್ಟಿನ ಒಳಗೆ ಕೈಗೊಳ್ಳಬಹುದಾದ ಅಭಿವೃದ್ಧಿ ಕಾರ್ಯಗಳನ್ನು ಪ್ರವಾಸೋದ್ಯಮ ಇಲಾಖೆಯ ಜಾರಿಗೊಳಿಸುತ್ತಿದೆ.

ಪ್ರಶ್ನೆ ಸಂಖ್ಯೆ : 58 (212) ಶ್ರೀ ಲಾಲಾಜಿ ಆರ್. ಮೆಂಡನ್ (ಕಾಪು)

ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಕಾಪು ದೇಶ ಸ್ಥಂಭವನ್ನು ಪ್ರವಾಸೋದ್ಯಮವಾಗಿ ಅಭಿವೃದ್ಧಿಪಡಿಸಲು ನಿಗಧಿಪಡಿಸಿದ ಅನುದಾನವೆಷ್ಟು;

ಆ) ಪ್ರಸ್ತುತ ವರ್ಷದಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು;

ಇ) ಇದರ ನೀಲಿ ನಕ್ಷೆಯನ್ನು ನೀಡುವುದು.

ಶ್ರೀ ಬಿ.ಶ್ರೀರಾಮುಲು

ಅ) ಕಾಪು ದೀಪಸ್ಥಂಭ – ಅಭಿವೃದ್ಧಿಗಾಗಿ ಯಾವುದೇ ಅನುದಾನವನ್ನು ನಿಗಧಿಪಡಿಸಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಪ್ರಶ್ನೆ ಸಂಖ್ಯೆ : 59 (89) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವ ಕಲ್ಯಾಣ)

ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ಎಷ್ಟು ಕಿ.ಮೀ. ರಸ್ತೆಗಳಿವೆ (ಈ ರಸ್ತೆಗಳ ಹೆಸರು ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ಅಂಕಿ ಅಂಶಗಳಲ್ಲಿ ಒದಗಿಸುವುದು);

ಆ) ಈ ರಸ್ತೆಗಳ ದುರಸ್ತಿ ಮತ್ತು ಮೇಲ್ದರ್ಜೆಗೆ ಏರಿಸಲು ಸರ್ಕಾರ ಪ್ರಸಕ್ತ ಸಾಲಿನಲ್ಲಿ ಎಷ್ಟು ಹಣವನ್ನು ಖರ್ಚು ಮಾಡುತ್ತಿದೆ;

ಇ) ಬಸವಕಲ್ಯಾಣ ಮತಕ್ಷೇತ್ರದಲ್ಲಿ ಬಹುತೇಕ ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ತುರ್ತಾಗಿ ಈ ರಸ್ತೆಗಳನ್ನು ದುರಸ್ತಿಪಡಿಸಿ ಮೇಲ್ದರ್ಜೆಗೆ ಏರಿಸಲು ಸರ್ಕಾರದ ಮುಂದಿರುವ ಕ್ರಮಗಳೇನು;

ಉ) ಕಳೆದ 3 ವರ್ಷಗಳಿಂದ ಇಲ್ಲಿಯವರೆವಿಗೆ ಇದಕ್ಕಾಗಿ ಬಿಡುಗಡೆ ಮಾಡಿರುವ ಹಣವೆಷ್ಟು?

ಶ್ರೀ ಹೆಚ್.ಡಿ.ರೇವಣ್ಣ

ಅ) ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ